ಉ) ಹಾಗಿದ್ದಲ್ಲಿ ಈ ತೊಂದರೆಯನ್ನು ಹೋಗಲಾಡಿಸಲು ಹಾಗೂ ಉಪನ್ಯಾಸಕರನ್ನು ನೇಮಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು):–

ಅ) ಬಂದಿದೆ.

ಆ) ಒಬ್ಬ ಪೂರ್ಣಕಾಲಿಕ ಉಪನ್ಯಾಸಕರ ಸ್ಥಾನದಲ್ಲಿ ಇಬ್ಬರು ಅರೆಕಾಲಿಕ ಉಪನ್ಯಾಸಕರನ್ನು ನೇಮಿಸಿ ವಿದ್ಯಾರ್ಥಿಗಳ ಪಾಠ ಪ್ರವಚನಕ್ಕೆ ತೊಂದರೆಯಾಗದಂತೆ ಗಮನ ವಹಿಸಲಾಗಿದೆ.

ಇ) ಸದರಿ ಕಾಲೇಜಿನಲ್ಲಿ ಗುತ್ತಿಗೆ ಆಧಾರದ ಮೇಲೆ ಉಪನ್ಯಾಸಕರನ್ನು ನೇಮಿಸಿಲ್ಲ. ಅರೆಕಾಲಿಕ ಉಪನ್ಯಾಸಕರಿಗೆ ಮಾಸಿಕ 600 ರೂಪಾಯಿಗಳ ಅಂಶಕಾಲಿಕ ಭತ್ಯೆ ನೀಡಲಾಗುತ್ತಿದೆ.

ಈ) ಪ್ರಶ್ನೆ (ಅ)ದಲ್ಲಿನ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಈ ವಿಷಯವು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದ್ದು ಈ ದಿಶೆಯಲ್ಲಿ ತ್ವರಿತ ಕ್ರಮ ಕೈಗೊಳ್ಳಲಾಗುವುದು.

ವಿಶ್ವವಿದ್ಯಾನಿಲಯಗಳ ಪರೀಕ್ಷಾ ಪದ್ಧತಿಯಲ್ಲಿ ಲೋಪದೋಷಗಳು

309 (937) ಪಿ.ಜಿ.ಆರ್. ಸಿಂಧ್ಯ (ಕನಕಪುರ):-

ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

1. ರಾಜ್ಯದ ವಿವಿಧ ವಿಶ್ವವಿದ್ಯಾನಿಲಯಗಳ ಪರೀಕ್ಷಾ ಪದ್ಧತಿಯಲ್ಲಿ ಲೋಪ ದೋಷಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

2. ಕಳೆದ ಎರಡು ವರ್ಷಗಳಲ್ಲಿ ಈ ಲೋಪದೋಷಗಳ ಬಗ್ಗೆ ವಿಚಾರಣೆ ನಡೆದಿದೆಯೇ;

3. ನಡೆದಿದ್ದಲ್ಲಿ ಇವುಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು;

4. ಈಗಿರುವ ಪರೀಕ್ಷಾ ಪದ್ಧತಿಯನ್ನು ಬದಲಾವಣೆ ಮಾಡುವ ಯೋಜನೆ ಸರ್ಕಾರದ ಮುಂದೆ ಇದೆಯೇ ?

ಶ್ರೀ ಎಸ್.ಎಂ. ಯಾಹ್ಯಾ (ಉನ್ನತ ಶಿಕ್ಷಣ ಸಚಿವರು):–

1. ಇಲ್ಲ.

2. ಉದ್ಭವಿಸುವುದಿಲ್ಲ.

3. ಉದ್ಭವಿಸುವುದಿಲ್ಲ.

4. ಇಲ್ಲ.

ವಯಸ್ಕರ ಶಿಕ್ಷಣ ಇಲಾಖೆಯ ಸಿಬ್ಬಂದಿಯ ಸಂಖ್ಯೆ

310 (938) ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ):-

ವಯಸ್ಕರ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದ ವಯಸ್ಕರ ಶಿಕ್ಷಣ ಇಲಾಖೆಯಲ್ಲಿ ಇರುವ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು;

ಆ) ವಯಸ್ಕರ ಶಿಕ್ಷಣಕ್ಕಾಗಿ ವರ್ಷ ಒಂದಕ್ಕೆ ಖರ್ಚು ಮಾಡುತ್ತಿರುವ ಹಣವೆಷ್ಟು;

ಇ) ಇದರಲ್ಲಿ ಕೇಂದ್ರ ಸರ್ಕಾರದ ಪಾಲು ಎಷ್ಟು ?

ಶ್ರೀ ಪ್ರಭಾಕರ ಎಸ್. ಠಾಣೆ (ವಯಸ್ಕರ ಶಿಕ್ಷಣ ಸಚಿವರು):-

ಅ) 150

ಆ) 1991-92ನೇ ಸಾಲಿನಲ್ಲಿ ಒಟ್ಟಾರೆ ರೂ. 1192.09 ಲಕ್ಷ ಖರ್ಚು ಮಾಡಲಾಗಿದೆ.

ಇ) ರೂ. 816.63 ಲಕ್ಷಗಳು

ದಕ್ಷಿಣ ಕನ್ನಡ ಜಿಲ್ಲೆಯ ರಂಪಣಿ ಬಲೆ

312 (689) ಶ್ರೀ ಕೆ. ಸೋಮಪ್ಪ ಸುವರ್ಣ, (ಮೂಲ್ಕಿ-ಮೂಡಬಿದರೆ):-

ಮೀನುಗಾರಿಕೆ ಮತ್ತು ಬಂದರುಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಾಡಿಕೆಯಲ್ಲದ್ದ ಬಲೆಯಲ್ಲಿ ಮೀನು ಹಿಡಿಯುವ ದೋಣಿ ಬಲೆಗಳು ಎಷ್ಟು ಅಸ್ತಿತ್ವದಲ್ಲಿದೆ;

ಆ) ಈಗ ರಂಪಣಿಯಲ್ಲಿ ಮೀನು ಹಿಡಿಯುವಿಕೆಯಲ್ಲಿ ಲಾಭದಾಯಕವಾಗಿರುವುದೇ;

ಇ) ಸರ್ಕಾರದ ಯಾವ ಸಹಾಯವನ್ನು ಪಡೆಯದೇ ಕಾರ್ಯಾಚರಿಸುತ್ತಿರುವ ಈ ರಂಪಣಿ ಪಂಡಿನವರಿಗೆ ಸರ್ಕಾರದ ಸಹಾಯ ಧನ ಕೊಡುವ ಆಲೋಚನೆ ಇದೆಯೇ ?

ಶ್ರೀ ವಸಂತ ವಿ. ಸಾಲಿಯಾನ (ಮೀನುಗಾರಿಕೆ ಮತ್ತು ಬಂದರುಗಳ ರಾಜ್ಯ ಸಚಿವರು):-

ಅ) ಒಂದು ರಂಪಣಿ ಫಂಡ್ ಮೀನುಗಾರಿಕೆ (ರಂಪಣಿ ಬಲೆ) ಘಟಕವು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಸ್ತಿತ್ವದಲ್ಲಿದೆ.

ಆ) ಇಲ್ಲ.

ಇ) ಇಲ್ಲ.

ವೀರಾಜಪೇಟೆ ತಾಲ್ಲೂಕಿನಲ್ಲಿ ಪಶುಸಂಗೋಪನೆ ಇಲಾಖೆಯಲ್ಲಿರುವ ಹುದ್ದೆಗಳ ಭರ್ತಿ

314 (690) ಶ್ರೀಮತಿ ಸುಮಾ ವಸಂತ (ವೀರಾಜಪೇಟೆ):-

ಪಶು ಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ವೀರಾಜಪೇಟೆ ತಾಲ್ಲೂಕಿನ ಪಶು ಸಂಗೋಪನಾ ಇಲಾಖೆಯಲ್ಲಿ ಸೂಪರ್‌ವೈಸರ್ಸ್, ವೆಟರ್ನರಿ ಇನ್ಸ್‌ಪೆಕ್ಟರ್ಸ್, ವೆಟರ್ನರಿ ಸಹಾಯಕರು, ದಲಾಯಿತರುಗಳ ಹುದ್ದೆ ಎಷ್ಟು ಖಾಲಿ ಇವೆ;

ಆ) ಹುದ್ದೆಗಳು ಭರ್ತಿಯಾಗದೆ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;